ಯೋಜನೆಗಳನ್ನು ಬರಗೂರು ರಾಮಚಂದ್ರಪ್ಪನವರ ಅಧ್ಯಕ್ಷತೆಯ ಗಡಿನಾಡು ಅಧ್ಯಯನ ಆಯೋಗದ ಶಿಫಾರಸ್ಸುಗಳನ್ವಯ ಗಡಿಭಾಗದ ಅಭಿವೃದ್ಧಿಗೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು, ಎಲ್ಲಾ ಸಂಬಂಧಿತ ಶಾಸಕರಿಗೂ, ಜಿಲ್ಲಾಧಿಕಾರಿಗಳಿಗೂ ಪತ್ರ ಬರೆಯಲಾಗಿದೆ. ಅದರನ್ವಯ ಸಂಬಂಧಪಟ್ಟ ವಿಧಾಸಭೆಯ ಸದಸ್ಯರುಗಳೊಡನೆ ಸಮಾಲೋಚಿಸಿ ಕ್ರಿಯಾ ಯೋಜನೆ ತಯಾರಿಸಲಾಗುತ್ತಿದೆ.

770 (1101) ಶ್ರೀ ಮೋಹನ್ ಕೃಷ್ಣಶೆಟ್ಟಿ (ಕುಮಟಾ): ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕುಮಟಾ ವಿಧಾನ ಸಭಾ ಕ್ಷೇತ್ರದ ಕುಮಟಾ ಹಾಗೂ ಹೊನ್ನಾವರ ತಾಲೂಕುಗಳ ಸಣ್ಣ ನೀರಾವರಿ ಇಲಾಖೆಗೊಳಪಡುವ ಅನೇಕ ಗಜನಿಗಳಿಗೆ ಕಾರ್ಲಾಂಡುಗಳನ್ನು (ಉಪ್ಪು ನೀರು ತಡೆಗಳು) ನಿರ್ಮಾಣ ಮಾಡದೆ ಹಾಗೂ ಹಾಲಿ ಇರುವಂತಹವನ್ನು ದುರಸ್ತಿಗೊಳಿಸದಿರುವುದರಿಂದ ರೈತರು ತೊಂದರೆಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ರೈತರ ಕೃಷಿ ಭೂಮಿಗೆ ಉಪ್ಪು ನೀರು ನುಗ್ಗಿ ಅಪಾರ ಪ್ರಮಾಣದ ಬೆಳೆ ಹಾನಿಗೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಸಣ್ಣ ಕಾರ್ಲಾಂಡು ನಿರ್ಮಾಣಕ್ಕೆ ನೀರಾವರಿ ಇಲಾಖೆಯಿಂದ ಸರ್ಕಾರ ಕ್ರಮ ಕೈಗೊಳ್ಳುವುದು ಯಾವಾಗ ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು):

ಅ) ಬಂದಿದೆ.

ಆ) ಬಂದಿದೆ.

ಇ) ಅನುದಾನಕ್ಕನುಗುಣವಾಗಿ ಉಪ್ಪು ನೀರು ತಡೆ ನಿರ್ಮಾಣವನ್ನು ಕೈಗೊಳ್ಳಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ಸಣ್ಣ ನೀರಾವರಿ ಇಲಾಖೆ ಒದಗಿಸಿರುವ ಪೂರಕ ಅನುದಾನದಲ್ಲಿ ಈ ಕೆಳಕಂಡ ಕಾಮಗಾರಿಯನ್ನು ಕೈಗೊಳ್ಳಲು ಯೋಜಿಸಲಾಗಿದೆ.

(ಲಕ್ಷ. ರೂ.ಗಳಲ್ಲಿ)

ಕ್ರ ಸಂ.	ಕಾಮಗಾರಿಯ ವಿವರ	ಅಂದಾಜು ಮೊತ್ತ	ರಕ್ಷಣೆ ಮಾಡಬಹುದಾದ ನೀರಾವರಿ ಕ್ಷೇತ್ರ
1.	ಹೆಬ್ಬೈಲ್ ಆನೆಗುಂದಿ ಹತ್ತಿರ ಕ್ವಾರಭೂಮಿ ಯೋಜನೆ	30.00	50 ಎಕರೆ